**<u>ದಿನಾಂಕ 13.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ನಾನು ಐಟಿಐ ತರಬೇತಿ ಮುಗಿಸಿದ್ದೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಆ ದಿನ ನಾನು ಆವರ್ತಿಯಿಂದ ಬುಲ್ಲಳ್ಳಿ ಗೇಟ್ ಕಡೆಗೆ 50 ಕೆ.ಜಿ ಯ ಒಂದು ಮೂಟೆ ಗೊಬ್ಬರ ತೆಗೆದುಕೊಂಡು ಹೋಗುತ್ತಿದ್ದೆನು. ಗೊಬ್ಬರವನ್ನು ನನ್ನ ವಾಹನದ ಹಿಂಭಾಗದಲ್ಲಿ ಇಟ್ಟುಕೊಂಡಿದ್ದೆನು. ಆ ದಿನ ಬೈಕಿನಲ್ಲಿ ನಾನೊಬ್ಬನೇ ಇದ್ದೆನು. ಆ ದಿನ ಬೈಕನ್ನು ಸುಮಾರು 30 ಕಿ.ಮೀ ವೇಗದಲ್ಲಿ ಚಾಲನೆ ಮಾಡುತ್ತಿದ್ದೆ. ಆ ದಿನ ನಾನು ಹೆಲ್ಮೆಟ್ ಧರಿಸಿದ್ದೆನು. ದಿನಾಂಕ 20.06.2023ರಂದು ಅಪಘಾತವಾಗಿರುತ್ತದೆ.

ಅಪಘಾತವಾಗುವ ಪೂರ್ವದಲ್ಲಿ ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಕೆಲಸ ಮತ್ತು ಆದಾಯ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ದಾಖಲಾತಿಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಚಾಲನೆ ಮಾಡುತ್ತಿದ್ದ ಬೈಕಿಗೆ ವಿಮೆ ಇರಲಿಲ್ಲ. ವಾಹನದಲ್ಲಿ ಹೆಚ್ಚಿ ನ ತೂಕವನ್ನು ಹಾಕಿಕೊಂಡು ಅಜಾಗರೂಕತೆಯಿಂದ ಅತೀವೇಗದಲ್ಲಿ ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡಿಕೊಂಡು ಹೋಗುತ್ತಿದ್ದೆ ಎಂದರೆ ಸರಿಯಲ್ಲ. ನನ್ನ ಅಜಾಗರೂಕತೆಯಿಂದ ಅಪಘಾತ ಸಂಭವಿಸಿದೆ ಎಂದರೆ ಸರಿಯಲ್ಲ. ವಾಹನದಲ್ಲಿ ತೂಕದ ವಸ್ತು ಇದ್ದ ಕಾರಣ ನಿಯಂತ್ರಣ ತಪ್ಪಿ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. 1ನೇ ಎದುರುದಾರರಿಗೆ ತೊಂದರೆ ನೀಡುವ ಉದ್ದೇಶದಿಂದ ಸುಳ್ಳು ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಆಪಾದಿತ ವಾಹನಕ್ಕೆ ವಿಮೆ ಇರುವ ಕಾರಣ 1ನೇ ಎದುರುದಾರರು ಯಾವುದೇ ರೀತಿಯ

ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ತಪ್ಪಿ ನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**